PR No. 7411/31/1/18 CC: 170148

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 12 ಹೆಚ್‌ಡಬ್ಲ್ಯೂಪಿ 2014

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ
ಬೆಂಗಳೂರು ದಿನಾಂಕ: 08.01.2018.

## ಸು ತ್ತೋ ಲೆ

ವಿಷಯ: ಆದ್ಯತಾಸೂಚಿ ಪಟ್ಟಿಯಲ್ಲಿ ಒಂದೇ ಅನುಚ್ಛೇದದಲ್ಲಿರುವವರುಗಳ ನಡುವೆ ಆದ್ಯತೆಯನ್ನು ಪರಿಗಣಿಸುವ ಕುರಿತು.

ಉಲ್ಲೇಖ: 1) ಸುತ್ತೋಲೆ ಸಂಖ್ಯೆ: ಸಿಆಸುಇ 12 ಹೆಚ್‌ಡಬ್ಲ್ಯೂಪಿ 2014, ದಿನಾಂಕ 21.9.2015.

2) ಮಾನ್ಯ ವಿಧಾನಪರಿಷತ್ ಸದಸ್ಯರಾದ ಶ್ರೀ ಬಸವರಾಜ ಹೊರಟ್ಟಿ ಇವರ ಅ.ಸ.ಪತ್ರ ಸಂಖ್ಯೆ: ವಿಪಸ:ಪಶಿಕ್ಷೇ:577:2015-16, ದಿನಾಂಕ: 13.10.2015 ಮತ್ತು 04.11.2016.

3) ಭಾರತ ಸರ್ಕಾರದ ಕೇಂದ್ರ ಗೃಹ ಮಂತ್ರಾಲಯ ಇವರ ಪತ್ರ ಸಂಖ್ಯೆ: 12/7/2016-Public, ದಿನಾಂಕ 02.01.2017.

JD (Plan) / BIA / J Madhu

***

ಸರ್ಕಾರದ ಸಭೆ ಸಮಾರಂಭಗಳಿಗೆ ಜನಪ್ರತಿನಿಧಿಗಳನ್ನು ಆಹ್ವಾನಿಸುವ ಬಗ್ಗೆ ಉಲ್ಲೇಖ (1)ರಡಿ ಸುತ್ತೋಲೆ ಹೊರಡಿಸಿ, ಕರ್ನಾಟಕ ರಾಜ್ಯ ಆದ್ಯತಾ ಸೂಚಿ 2014ರನ್ವಯ ಶಿಷ್ಟಾಚಾರ ಪಾಲಿಸಲು ಸೂಚಿಸಲಾಗಿದೆ.

ಮಾನ್ಯ ವಿಧಾನ ಪರಿಷತ್ತು ಸದಸ್ಯರು ಹಾಗೂ ಮಾಜಿ ಶಿಕ್ಷಣ ಸಚಿವರು ತಮ್ಮ ಉಲ್ಲೇಖ (2)ರ ದಿನಾಂಕ 13.10.2015ರ ಪತ್ರದಲ್ಲಿ ಹಿರಿಯ ವಿಧಾನ ಪರಿಷತ್ ಸದಸ್ಯರುಗಳ ಗೌರವಕ್ಕೆ ತೊಂದರೆಯಾಗದಂತೆ 2014ರ ಆದ್ಯತಾ ಪಟ್ಟಿಯಲ್ಲಿರುವಂತೆ ಸಂಸತ್ ಸದಸ್ಯರು, ವಿಧಾನ ಸಭೆ / ವಿಧಾನ ಪರಿಷತ್ ಸದಸ್ಯರ ಶಿಷ್ಟಾಚಾರದ ಯಥಾಸ್ಥಿತಿಯನ್ನು ಮುಂದುವರೆಸಿ ಹಿರಿಯ ಸದಸ್ಯರುಗಳಿಗೆ ಅವಕಾಶ ಕಲ್ಪಿಸಲು ಅವಶ್ಯ ಕ್ರಮ ಕೈಗೊಳ್ಳಬೇಕೆಂದು ಕೋರಿರುತ್ತಾರೆ.

ವಿಧಾನಸಭಾ ಸದಸ್ಯರು ಮತ್ತು ವಿಧಾನ ಪರಿಷತ್ ಸದಸ್ಯರುಗಳು 2015ರ ಆದ್ಯತಾ ಸೂಚಿಪಟ್ಟಿಯ ಕ್ರಮ ಸಂಖ್ಯೆ 21A ಅನುಚ್ಛೇದದಲ್ಲಿ ಸ್ಥಾನವನ್ನು ಪಡೆಯುತ್ತಾರೆ. ಈ ರೀತಿ ಒಂದೇ ಅನುಚ್ಛೇದದಲ್ಲಿ ಇರುವ ಹುದ್ದೆಗಳಿಗೆ ಸಂಬಂಧಿಸಿದಂತೆ ಯಾರನ್ನು ಆದ್ಯತೆ ಪ್ರಕಾರ ಪರಿಗಣಿಸಬೇಕು ಎನ್ನುವುದನ್ನು ಕುರಿತು ಭಾರತ ಸರ್ಕಾರದ ಗೃಹ ಮಂತ್ರಾಲಯದಿಂದ ಅಭಿಪ್ರಾಯ ಕೋರಲಾಗಿದ್ದು, ಗೃಹ ಮಂತ್ರಾಲಯವು ಉಲ್ಲೇಖ (3)ರಲ್ಲಿರುವ ಪತ್ರದಲ್ಲಿ **"as per the practice the person who have served for more than one term continuously are placed higher in the Table of Precedence (ToP)"** ಎಂದು ಅಭಿಪ್ರಾಯಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಆದ್ಯತಾಸೂಚಿ ಪಟ್ಟಿಯಲ್ಲಿ ಒಂದೇ ಅನುಚ್ಛೇದದಲ್ಲಿರುವವರುಗಳ ನಡುವೆ ಆದ್ಯತೆ ನೀಡುವಾಗ, ಯಾವ ವ್ಯಕ್ತಿಗಳು ಒಂದಕ್ಕಿಂತ ಹೆಚ್ಚು ಅವಧಿಗೆ ಸತತವಾಗಿ ಅದೇ ಸ್ಥಾನದಲ್ಲಿ ಮುಂದುವರೆದಿರುತ್ತಾರೋ ಅಂತಹವರಿಗೆ ಪರಸ್ಪರ ಆದ್ಯತೆಯನ್ನು ನಿಗದಿಪಡಿಸುವಾಗ ಮೇಲಿನ ಸ್ಥಾನವನ್ನು ನಿಗದಿಪಡಿಸಲು ಸೂಚಿಸಿದೆ.

Received on 30/01/18

(ಡಾ॥ ಬಿ.ಎಸ್. ಮಂಜುನಾಥ ಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಿಆಸು ಇಲಾಖೆ(ರಾಜ್ಯ ಶಿಷ್ಟಾಚಾರ).

**ಪ್ರತಿಗಳು:**

1) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು.

2) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
3) ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಗಳು, ರಾಜಭವನ, ಬೆಂಗಳೂರು.
4) ನಿವಾಸಿ ಆಯುಕ್ತರು, ಕರ್ನಾಟಕ ಭವನ, ನವದೆಹಲಿ.
5) ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ.
6) ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್.
7) ಎಲ್ಲಾ ವಿಭಾಗಾಧಿಕಾರಿಗಳು.
8) ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
9) ಎಲ್ಲಾ ಜಿಲ್ಲಾಧಿಕಾರಿಗಳು.
10) ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
11) ಎಲ್ಲಾ ಸಚಿವರ ಆಪ್ತ ಕಾರ್ಯದರ್ಶಿಗಳು.
12) ಪತ್ರಿಕಾ ಪ್ರಕಟಣೆ / ಹೆಚ್ಚುವರಿ ಪ್ರತಿಗಳು.

ಮಾಹಿತಿಗಾಗಿ:

1) ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಆಸು ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸು ಇಲಾಖೆ (ರಾಜಕೀಯ).

**ಹಿಂಬರಹ ಸಂಖ್ಯೆ: ಡಿಟಿಇ 33 ಬಿಎಲ್‌ಡಿ 2015** **ದಿನಾಂಕ:31-01-2018.**

ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 12 ಹೆಚ್‌ಡಬ್ಲ್ಯೂಪಿ 2014 ದಿನಾಂಕ:08-01-2018 ಅನ್ನು ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಲಾಗಿದೆ.

C.D. Ramalingad
**ನಿರ್ದೇಶಕರು**
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560001.

ಆಯುಕ್ತರು ನಿರ್ದೇಶಕರಿಂದ ಅನುಮೋದಿಸಿದೆ.

**ಇವರಿಗೆ:**

**ಪ್ರಿನ್ಸಿಪಾಲರು,**

ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮತ್ತು ಸರ್ಕಾರಿ ಪಾಲಿಟೆಕ್ನಿಕ್‌ಗಳು.

**ಪ್ರತಿ:**

ಇ-ಆಡಳಿತ ವಿಭಾಗ - ಮಾಹಿತಿಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು.